**ಸಾಕ್ಷಿಯನ್ನು ದಿಃ 17.11.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು, ಎರಡು ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ಒಟ್ಟಾಗಿ ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು, ಅಮಾನತ್ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು, ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು, 20 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಎಂದು, ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 9 ಎಂದು, 5 ಸ್ಕ್ಯಾನ್ ಮತ್ತು ಎಕ್ಸರೇ ವರದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 10 ಎಂದು, 5 ಎಕ್ಸರೇಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 11 ಎಂದು ಗುರುತಿಸಲಾಯಿತು.

(ನಿಪಿ. 9 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.